ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ
BENGALURU CENTRAL UNIVERSITY

ಸಂಖ್ಯೆ:ಬಿಸಿಯು/ಕು.ಸ/ಸಂಯೋಜನೆ/2018-19 ದಿನಾಂಕ: 08-08-2018

**ಅಧಿಸೂಚನೆ**

**ವಿಷಯ:** 2018-19ನೇ ಶೈಕ್ಷಣಿಕ ಸಾಲಿಗೆ, ಬೆಂಗಳೂರು **ಸಿಂಧಿ ಇನ್ಸಿಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನಲ್ಲಿ** ಎಂ.ಬಿ.ಎ ಕೋರ್ಸುಗೆ ಹೊಸ ಸಂಯೋಜನೆ ನೀಡುವ ಬಗ್ಗೆ.

**ಉಲ್ಲೇಖ: 1)** ಸರ್ಕಾರದ ಪತ್ರದ ಸಂಖ್ಯೆ: ಇಡಿ 164 ಯುಬಿವಿ 2018 ದಿನಾಂಕ :07-08-2018

**2)** ಕುಲಪತಿಗಳ ಆದೇಶ ದಿನಾಂಕ :

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಹಾಗೂ ತಿದ್ದುಪಡಿ ಅಧಿನಿಯಮ 2015ರ, 7ನೇ ಪ್ರಕರಣ ಅಧಿಕಾರನ್ವಯ ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯವು, ಬೆಂಗಳೂರಿನ **ಸಿಂಧಿ ಸೇವಾ ಸಮಿತಿ,** ಇವರು 2018-19ನೇ ಸಾಲಿಗೆ **ಸಿಂಧಿ ಇನ್ಸಿಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನಲ್ಲಿ** ಎಂ.ಬಿ.ಎ ಕೋರ್ಸುಗೆ ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸಂಯೋಜನೆಯನ್ನು ಮಂಜೂರು ಮಾಡಲಾಗಿದೆ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಎಂ.ಬಿ.ಎ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 120(ನೂರ ಇಪ್ಪತ್ತು) |

**ಷರತ್ತುಗಳು:**

1. ಕಾಲೇಜುಗಳಿಗೆ ಅನ್ವಯಾವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿಗೆ ಮೇಲ್ಕಂಡ ಕೋರ್ಸುಗಳಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡವುದಿಲ್ಲ; ಅವುಗಳನ್ನು ಶಾಶ್ವತ ಅನುದಾನ ರಹಿತ ಕೋರ್ಸುಗಳೆಂದು ಪರಿಗಣಿಸತಕ್ಕದ್ದು.
2. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
3. ಸದರಿ ಪದವಿ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
4. ಸ್ಥಳೀಯ ವಿಚಾರಣಾ ಸಮಿತಿಯ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಹಾಗೂ ಇವುಗಳನ್ನು ಪಾಲಿಸಿದ ಬಗ್ಗೆ ವರದಿಯನ್ನು ವಿಶ್ವವಿದ್ಯಾಲಯದಕ್ಕೆ 15 ದಿನಗಳ ಒಳಗಾಗಿ ಕಳುಹಿಸತಕ್ಕದ್ದು.
5. ಸದರಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮಿಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
6. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

7. ವೈಶಾಕ V/S ರಾಜಸ್ಥಾನರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ: 13.08.1997ರ ಸರ್ವೋಚ್ಚ ನ್ಯಾಯಾಲಯಾದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಬೋಧಕ / ಬೋಧಕೇತರ / ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ / ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯಅಪರಾಧಗಳನ್ನು / ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.
8. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರಗೆ ಅನಗತ್ಯವಾಗಿ ತಲ್ಪಿಡಿಯತಕ್ಕದ್ದಲ್ಲ
9. ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು, ವಿದ್ಯಾರ್ಥಿಗಳ ಶೈಕ್ಷಣಿಕವಾಗಿ ಅಭಿವೃದ್ಧಿ ೊಳಿಸುವ ಮಟ್ಟಕ್ಕೆ ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು, ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನಿಭೂತಿಯಿಂದ ನೋಡಿಕೊಳ್ಳತಕ್ಕದು.
10. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು
11. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ ಸೆಮಿಸ್ಟರಿನ ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.
12. ಕಾಲೇಜು ಕೋರ್ಸುಗಳ ಶಿಕ್ಷಣ ಕ್ರಮವನ್ನು , ವಿದ್ಯಾರ್ಥಿಗಳ ಶೈಕ್ಷಣಿಕವಾಗಿ ಅಬಿವೃದ್ಧಿಗೊಳಿಸುವ ಮಟ್ಟಕ್ಕೆ ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು / ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದು.
13. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು
14. 2019-20ನೇ ಶೈಕ್ಷಣಿಕ ಸಾಲಿಗೆ ಕೋರ್ಸು/ಗಳ ಸಂಯೋಜನಾ ನವೀಕರಣಕ್ಕಾಗಿ ಅರ್ಜಿಯನ್ನು ತಪ್ಪದೆ ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯಕ್ಕೆ ಸಲ್ಲಿಸತಕ್ಕದ್ದು.
15. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು ಹಾಗೂ ಕಡ್ಡಾಯವಾಗಿ ಮೌಲ್ಯಮಾಪನ ಕಾರ್ಯಕ್ಕೆ ಕಳುಹಿಸ ತಕ್ಕದ್ದು, ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದು ಪಡಿಸಲಾಗುವುದು
16. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಭೋದಕರು ಹಾಗೂ ಭೋದಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಆಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು. ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರಿ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಂಡಲ್ಲಿ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

17. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ. ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

18. ಎಂ.ಬಿ.ಎ ಮತ್ತು ಎಂ.ಸಿ.ಎ ಕೋರ್ಸಿಗೆ ಕರ್ನಾಟಕಾ ಪರೀಕ್ಷಾ ಪ್ರಾಧೀಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಿರುವ ಸೀಟ್ ಮ್ಯಾಟ್ರೀಕ್ಸ್ ಬಂದ ನಂತರ ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದ ಅಧಿಸೂಚನೆ ಅನ್ವಯವಾಗುತ್ತದೆ.

19. ಪ್ರತಿ ಶೈಕ್ಷಣಿಕ ವರ್ಷದ ಎ.ಐ.ಸಿ.ಟಿ.ಇ.ಯ ವಿಸ್ತಾರಣಾ ಅನುಮೋದನೆಯನ್ನು ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು.

20. ಎ.ಐ.ಸಿ.ಟಿ.ಇ, ನವದೆಹಲಿ, ಕರ್ನಾಟಕ ಸರ್ಕಾರ ಹಾಗೂ ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ ವಿಧಿಸಿರುವ / ವಿಧಿಸುವ ಷರತ್ತು ನಿಬಂಧನೆಗಳನ್ನು ಕಟ್ಟು ನಿಟ್ಟಾಗಿ ಪಾಲಿಸತಕ್ಕದ್ದು.

21. ಕೋರ್ಸಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಕರ್ನಾಟಕ ಎಂ.ಬಿ.ಎ. ಮತ್ತು ಎಂ.ಸಿ.ಎ. ಕೋರ್ಸುಗಳ ಅಭ್ಯರ್ಥಿಗಳ ನಿಯಮಗಳನ್ವಯ ಮಾತ್ರ ಪಡೆಯತಕ್ಕದ್ದು.

22. ಕಾಲೇಜು / ಆಡಳಿತ ಮಂಡಳಿ ಶೇ.50ರಷ್ಟು ವಿಶ್ವವಿದ್ಯಾನಿಲಯದ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾನಿಲಯದ ನಿಯಮಾವಳಿ ಪ್ರಕಾರ ನಿಗಧಿಪಡಿಸತಕ್ಕದ್ದು, ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾನಿಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾನಿಲಯವು ನಿಗಧಿಪಡಿಸಿದ ಶುಲ್ಕ / ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

ಆಜ್ಞೆ ಮೇರೆಗೆ

ಕುಲಸಚಿವರು

ಗೆ,
ಅಧ್ಯಕ್ಷರು/ ಕಾರ್ಯದರ್ಶಿ,
**ಸಿಂಧಿ ಸೇವಾ ಸಮಿತಿ,**
ಕುಮಾರಕೃಪಾ,
ಬೆಂಗಳೂರು.

ಗೆ,
ಪ್ರಾಂಶುಪಾಲರು,
**ಸಿಂಧಿ ಇನ್ಸಿಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್,**
ನಂ.೩೩/೨ಬಿ, ಕೆಂಪಾಪುರ, ಹೆಬ್ಬಾಳ,
ಬೆಂಗಳೂರು– 560 024.

ಪ್ರತಿಗಳು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ॥.ಅಂಬೇಡ್ಕರ್ ವೀಧಿ, ಬೆಂಗಳೂರು –560 001.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು –560 001.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಬೆಂಗಳೂರು –560 001.

ATTESTED

Director
Sindhi Institute of Management
No. 33/2B, Kempapura, Hebbal
Bengaluru - 560 024.